**All India Radio: Bangalore**
**Regional Bulletin In Kannada**
**24.04.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**24.04.2025 / 2.30 p.m.**

*********************

ಮುಖ್ಯಾಂಶಗಳು

೧. ಮಹದೇಶ್ವರ ಬೆಟ್ಟದಲ್ಲಿ ಸಚಿವ ಸಂಪುಟ ಸಭೆ ಆರಂಭ ; ರಾಜ್ಯದಲ್ಲಿ ಅವಧಿ ಮೀರಿ ನೆಲೆಸಿರುವ ವಿದೇಶಿಗರ ಬಗ್ಗೆ ಎಚ್ಚರಿಕೆ ವಹಿಸಲು ಮುಖ್ಯಮಂತ್ರಿ ಸೂಚನೆ

೨. ಪಹಲ್ಗಾಮ್ ಭಯೋತ್ಪಾದಕರ ದಾಳಿ ; ಇಂದು ಮಂಜುನಾಥ್, ಭರತ್ ಭೂಷಣ್ ಅಂತ್ಯಕ್ರಿಯೆ ; ಗಣ್ಯರಿಂದ ಅಂತಿಮ ದರ್ಶನ

೩. ಕಾಶ್ಮೀರದ ವಿವಿಧೆಡೆ ಸಿಲುಕಿದ್ದ ೧೭೮ ಮಂದಿ ಕನ್ನಡಿಗರನ್ನು ಬೆಂಗಳೂರಿಗೆ ಕರೆ ತಂದ ಸಚಿವ ಸಂತೋಷ್ ಲಾಡ್

೪. ನೂತನ ಕೃಷಿ ವಿಶ್ವ ವಿದ್ಯಾಲಯ ವಿಧೇಯಕ ಅಂಗೀಕಾರ ಹಿನ್ನೆಲೆ ; ರಾಜ್ಯಪಾಲರಿಗೆ ಅಭಿನಂದನೆ ಸಲ್ಲಿಸಿದ ಕೃಷಿ ಸಚಿವ ಚಲುವರಾಯಸ್ವಾಮಿ

೫. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು-ರಾಜಸ್ಥಾನ ರಾಯಲ್ಸ್ ಹಣಾಹಣಿ

*****************

ಚಾಮರಾಜನಗರ ಜಿಲ್ಲೆಯ ಮಲೆಮಹದೇಶ್ವರ ಬೆಟ್ಟದಲ್ಲಿ ಸಚಿವ ಸಂಪುಟ ಸಭೆ ನಡೆಯುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆಯುತ್ತಿರುವ ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಸಂಪುಟದ ಸಹದ್ಯೋಗಿಗಳು ಪಾಲ್ಗೊಂಡಿದ್ದಾರೆ.

ಸಭೆಯಲ್ಲಿ ಚಾಮರಾಜನಗರ ಹಾಗೂ ಈ ಭಾಗದ ಜಿಲ್ಲೆಗಳ ಅಭಿವೃದ್ಧಿಗೆ ಯೋಜನೆ ಹಾಗೂ ಅನುದಾನ ನಿರೀಕ್ಷಿಸಲಾಗಿದೆ. ಇದೇ ಮೊದಲ ಬಾರಿಗೆ ಜರ್ಮನ್ ಟೆಂಟ್‌ನಲ್ಲಿ ಸಂಪುಟ ಸಭೆ ನಡೆಸುತ್ತಿರುವುದು ವಿಶೇಷವಾಗಿದೆ.

*****************

ರಾಜ್ಯದಲ್ಲಿ ಅವಧಿ ಮೀರಿ ನೆಲೆಸಿರುವ ವಿದೇಶಿಗರ ಬಗ್ಗೆ ಎಚ್ಚರಿಕೆಯಿಂದ ಇರುವಂತೆ ಗೃಹ ಇಲಾಖೆಗೆ ಸೂಚನೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಚಾಮರಾಜನಗರದ ಮಹದೇಶ್ವರ ಹೆಲಿಪ್ಯಾಡ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ಮೇಕೆದಾಟು ಯೋಜನೆಗೆ ಒಪ್ಪಿಗೆ ನೀಡಿದರೆ ತಕ್ಷಣವೇ ಜಾರಿಗೆ ತರಲಾಗುವುದು ಎಂದು ತಿಳಿಸಿದ್ದಾರೆ.

ಇದೇ ವೇಳೆ ಚಾಮರಾಜನಗರ ಜಿಲ್ಲೆಯ ಪ್ರಮುಖ ಯೋಜನೆಗಳ ಬಗ್ಗೆ ಸಂಪುಟ ಸಭೆಯಲ್ಲಿ ಚರ್ಚೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ.

*****************

ಪಹಲ್ಗಾಮ್ ಭಯೋತ್ಪಾದಕರ ದಾಳಿಯಲ್ಲಿ ಮೃತಪಟ್ಟ ಬೆಂಗಳೂರಿನ ಭರತ್ ಭೂಷಣ್ ಹಾಗೂ ಶಿವಮೊಗ್ಗದ ಮಂಜುನಾಥ ರಾವ್ ಅಂತ್ಯಕ್ರಿಯೆ ಇಂದು ನಡೆಯಲಿದೆ. ಇಂದು ಬೆಳಗ್ಗೆ ಬೆಂಗಳೂರಿನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಸಂಸದ ತೇಜಸ್ವೀ ಸೂರ್ಯ ನೇತೃತ್ವದಲ್ಲಿ ಕುಟುಂಬ ಸದಸ್ಯರೊಂದಿಗೆ ಪಾರ್ಥೀವ ಶರೀರ ಆಗಮಿಸಿತು.

ಭರತ್ ಭೂಷಣ್ ಪಾರ್ಥಿವ ಶರೀರವನ್ನು ಮತ್ತಿಕೆರೆಯ ಅವರ ನಿವಾಸದಲ್ಲಿ ಸಾರ್ವಜನಿಕ ದರ್ಶನಕ್ಕೆ ಇಡಲಾಗಿತ್ತು. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಕೇಂದ್ರ ಸಚಿವ ವಿ. ಸೋಮಣ್ಣ, ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವ ರಾಮಲಿಂಗಾರೆಡ್ಡಿ ಸೇರಿದಂತೆ ಹಲವು ಗಣ್ಯರು ಭೇಟಿ ನೀಡಿ ಗೌರವ ನಮನ ಸಲ್ಲಿಸಿದರು. ಮಧ್ಯಾಹ್ನ ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯಕ್ರಿಯೆ ನಡೆಯಲಿದೆ.

ಇದೇ ವೇಳೆ ಮಂಜುನಾಥರಾವ್ ಹಾಗೂ ಭರತ್ ಭೂಷಣ್ ಅವರ ಪಾರ್ಥೀವ ಶರೀರದ ಅಂತ್ಯಕ್ರಿಯೆಯನ್ನು ಪೊಲೀಸ್ ಗೌರವದೊಂದಿಗೆ ನೆರವೇರಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಭಯೋತ್ಪಾದಕರನ್ನು ಸದೆಬಡಿಯುವ ನಿಟ್ಟಿನಲ್ಲಿ ಕೇಂದ್ರಕ್ಕೆ ಸಂಪೂರ್ಣ ಬೆಂಬಲ ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ

ಶಿವಮೊಗ್ಗದ ಮಂಜುನಾಥ್ ರಾವ್ ಪಾರ್ಥಿವ ಶರೀರವನ್ನು ವಿಮಾನ ನಿಲ್ದಾಣದಿಂದ ಆಂಬ್ಯುಲೆನ್ಸ್ ಮೂಲಕ ಶಿವಮೊಗ್ಗಕ್ಕೆ ತರಲಾಯಿತು. ಈ ವೇಳೆ ಮಾರ್ಗ ಮಧ್ಯೆ ತುಮಕೂರು ನಗರ ಶಾಸಕ ಜ್ಯೋತಿಗಣೇಶ್ ಗೌರವ ಸಲ್ಲಿಸಿ, ಕುಟುಂಬಸ್ಥರಿಗೆ ಸಾಂತ್ವಾನ ಹೇಳಿದರು.

ಧ್ವನಿ : ಶಾಸಕ ಜ್ಯೋತಿಗಣೇಶ್

*****************

ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರ ಕಾಶ್ಮೀರದ ವಿವಿಧೆಡೆ ಸಿಲುಕಿದ್ದ ಸುಮಾರು ೧೭೮ ಮಂದಿ ಕನ್ನಡಿಗರನ್ನು  ಸುರಕ್ಷಿತವಾಗಿ ಬೆಂಗಳೂರಿಗೆ ಕರೆ ತರಲಾಯಿತು.

ಕನ್ನಡಿಗರನ್ನು ಒಳಗೊಂಡ ವಿಮಾನ ಬೆಂಗಳೂರು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಮಧ್ಯಾಹ್ನ ಬಂದಿಳಿಯಿತು. ದಾಳಿಯ ಮಾಹಿತಿ ದೊರೆಯುತ್ತಿದ್ದಂತೆಯೇ ರಾಜ್ಯ ಸರ್ಕಾರ ಎರಡು ವಿಶೇಷ ತಂಡಗಳನ್ನು ಕಾಶ್ಮೀರಕ್ಕೆ ಕಳುಹಿಸಿಕೊಟ್ಟಿತ್ತು.

ಕಾರ್ಮಿಕ ಸಚಿವ  ಸಂತೋಷ್ ಲಾಡ್ ನೇತೃತ್ವದಲ್ಲಿ ಕನ್ನಡಿಗರನ್ನು ವಾಪಸ್ ಕರೆತರುವ ಕಾರ್ಯಾಚರಣೆ ನಡೆಸಲಾಗಿತ್ತು. ಸಂಸದ ತೇಜಸ್ವಿ ಸೂರ್ಯ  ಕಾಶ್ಮೀರದಲ್ಲಿ ರಕ್ಷಣಾ ತಂಡಕ್ಕೆ ಸಾಥ್ ನೀಡಿದ್ದರು.

ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ  ಸಂತೋಷ್ ಲಾಡ್ ಎಲ್ಲರ ಸಹಕಾರದಿಂದ ಕನ್ನಡಿಗರನ್ನು ಕರೆತರುವುದು ಸಾಧ್ಯವಾಯಿತು ಎಂದು ತಿಳಿಸಿದ್ದಾರೆ.

*****************

ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದನಾ ಕೃತ್ಯ ಖಂಡನೀಯವಾಗಿದ್ದು, ಇದು ಸಾರ್ವಭೌಮತ್ವದ ಮೇಲೆ ನಡೆದಿರುವ ದಾಳಿಯಾಗಿದೆ ಎಂದು ಆದಿಚುಂಚನಗಿರಿ ಮಠದ ಪೀಠಾಧಿಪತಿ ನಿರ್ಮಲಾನಂದ ಸ್ವಾಮೀಜಿ ತಿಳಿಸಿದ್ದಾರೆ.

ಈ ಸಂಬಂಧ ಪತ್ರಿಕಾ ಪ್ರಕಟಣೆ ಬಿಡುಗಡೆ ಮಾಡಿರುವ ಅವರು, ೨೬ ಮಂದಿಯ ಸಾವು ಆಘಾತ ತಂದಿದೆ. ಪ್ರೀತಿ ಪಾತ್ರರನ್ನು ಕಳೆದುಕೊಂಡ ಕುಟುಂಬಕ್ಕೆ ಸಂತಾಪ ಸೂಚಿಸಿರುವ ಶ್ರೀಗಳು, ಗಾಯಗೊಂಡವರು ಚೇತರಿಸಿಕೊಳ್ಳಲಿ ಎಂದು ಹಾರೈಸಿದ್ದಾರೆ.

ಮೃತಪಟ್ಟವರ ಕಳೆಬರಗಳನ್ನು ತಂದ ರಾಜ್ಯ ಸರ್ಕಾರದ ಕಾರ್ಯ ಶ್ಲಾಘನೀಯ ಎಂದು ಹೇಳಿದ್ದಾರೆ.

*****************

ನೂತನ ಕೃಷಿ ವಿಶ್ವವಿದ್ಯಾಲಯ ವಿಧೇಯಕ ಅನುಮೋದನೆಗೆ ಸಂಬಂಧಿಸಿದಂತೆ ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚೆಲುವರಾಯಸ್ವಾಮಿ ರಾಜಭವನದಲ್ಲಿಂದು ರಾಜ್ಯಪಾಲರನ್ನು ಭೇಟಿ ಮಾಡಿ ಚರ್ಚೆ ನಡೆಸಿದರು.

ಬಜೆಟ್ ಅಧಿವೇಶನದಲ್ಲಿ ನೂತನ ಮಂಡ್ಯ ಕೃಷಿ ವಿಶ್ವವಿದ್ಯಾಲಯ ಪ್ರಾರಂಭಿಸುವ ಕುರಿತು ಉಭಯ ಸದನಗಳಲ್ಲಿ ವಿಧೇಯಕವನ್ನು ಅಂಗೀಕರಿಸಿ ರಾಜ್ಯಪಾಲರ ಅನುಮೋದನೆಗೆ ಕಳುಹಿಸಲಾಗಿತ್ತು.

ನೂತನ ಕೃಷಿ ವಿಜ್ಞಾನ ವಿಶ್ವವಿದ್ಯಾಲಯ ವಿಧೇಯಕವನ್ನು ಅಂಗೀಕರಿಸಿದ್ದಕ್ಕಾಗಿ ಕೃಷಿ ಸಚಿವರು ರಾಜ್ಯಪಾಲರಿಗೆ ಅಭಿನಂದನೆ ಸಲ್ಲಿಸಿದರು.

*****************

ರಾಷ್ಟ್ರ ಕವಿ ಕುವೆಂಪು ಅವರ ಆಶಯದಂತೆ ಸಮಪಾಲು ಸಮಬಾಳು ಸಮಾಜ ನಿರ್ಮಾಣದ ಅಗತ್ಯವಾಗಿದೆ ಎಂದು ಉಪ ಲೋಕಾಯುಕ್ತ ಬಿ.ವೀರಪ್ಪ ತಿಳಿಸಿದ್ದಾರೆ.

ದಾವಣಗೆರೆಯಲ್ಲಿಂದು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಮತ್ತು ಬಾಕಿ ಇರುವ ಪ್ರಕರಣಗಳ ವಿಚಾರಣಾ ಸಭೆ ಉದ್ದೇಶಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಲೋಕಾಯುಕ್ತ ಸಂಸ್ಥೆಯನ್ನು ಬಲಪಡಿಸುವ ನಿಟ್ಟಿನಲ್ಲಿ ರಾಜ್ಯಾದ್ಯಂತ ಪ್ರವಾಸ ಕೈಗೊಂಡಿದ್ದು, ಭ್ರಷ್ಟಾಚಾರದ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

ಧ್ವನಿ : ಬಿ. ವೀರಪ್ಪ

*****************

ಇಂದು ವರನಟ ದಿವಂಗತ ಡಾ.ರಾಜ್‌ಕುಮಾರ್ ಅವರ ೯೭ನೇ ಜನ್ಮದಿನ. ರಾಜ್ಯದ ವಿವಿಧೆಡೆ ಡಾ. ರಾಜಕುಮಾರ್ ಜಯಂತಿಯನ್ನು ಆಚರಿಸಲಾಯಿತು. ಕುಟುಂಬಸ್ಥರು ಡಾ. ರಾಜ್ ಸಮಾಧಿಗೆ ತೆರಳಿ ಪೂಜೆ ಸಲ್ಲಿಸಿದರು.

ಬಳ್ಳಾರಿಯಲ್ಲಿ ಡಾ.ರಾಜ್‌ಕುಮಾರ್ ಉದ್ಯಾನವನದಲ್ಲಿನ ರಾಜ್ ಕುಮಾರ್ ಪುತ್ಥಳಿಗೆ ಅಧಿಕಾರಿ ವೃಂದದ, ವಿವಿಧ ಕನ್ನಡ ಪರ ಸಂಘಟನೆಗಳ ಪದಾಧಿಕಾರಿಗಳು ಮಾಲಾರ್ಪಣೆ ಮಾಡಿ ಪುಷ್ಪನಮನ ಸಲ್ಲಿಸಿದರು. ಈ ವೇಳೆ ಮಾತನಾಡಿದ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್, ಕನ್ನಡ ನಾಡು-ನುಡಿ, ಭಾಷಾಭಿಮಾನ ರಾಷ್ಟ್ರ ಮಟ್ಟದಲ್ಲಿ ಬೆಳೆಸಲು ತಮ್ಮದೇ ಆದ ನಟನ ಶೈಲಿಯಲ್ಲಿ ಬೆಳ್ಳಿ ಪರದೆ ಮೇಲೆ ಒಲವು ಮೂಡಿಸಿದ ವರನಟ ಡಾ.ರಾಜ್ ಕುಮಾರ್ ಅವರ ಕೊಡುಗೆ ಅಪಾರ ಎಂದರು.

ವರನಟ ರಾಜಕುಮಾರ್ ೯೬ ವರ್ಷ ಹುಟ್ಟು ಹಬ್ಬವನ್ನು ಚಿತ್ರದುರ್ಗ ಜಿಲ್ಲಾಡಳಿತ ವತಿಯಿಂದ ಜಿಲ್ಲಾಧಿಕಾರಿ ಸಭಾಂಗಣದಲ್ಲಿ ಆಚರಿಸಲಾಯಿತು. ಚಿತ್ರದುರ್ಗ ಶಾಸಕ ಕೆಸಿ, ವೀರೇಂದ್ರ ಪುಪ್ಪ ನಮನ ಸಲ್ಲಿಸಿದರು.

*****************

ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲ್ಲೂಕಿನ ಖಾಸಗಿ ವಸತಿ ಶಾಲೆಯಲ್ಲಿದ್ದ ಮೇಘಾಲಯದ ೨೨ ಮಕ್ಕಳನ್ನು ರಾಜ್ಯ ಸರ್ಕಾರ ಮತ್ತು ಮಂಡ್ಯ ಜಿಲ್ಲಾಡಳಿತದ ಅಧಿಕಾರಿಗಳು ಮೇಘಾಲಯಕ್ಕೆ ಮರಳಿ ಪೋಷಕರಿಗೆ ಹಸ್ತಾಂತರಿಸಿದ್ದಾರೆ.

ಈ ಮಕ್ಕಳು ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲ್ಲೂಕಿನ ಟಿ.ಕಾಗೇಪುರ ಗ್ರಾಮದ ಗೋಕುಲ ವಿದ್ಯಾಸಂಸ್ಥೆಯಲ್ಲಿ ವ್ಯಾಸಂಗ ಮಾಡುತ್ತಿದ್ದರು. ಕಳೆದ ತಿಂಗಳು ಹೋಳಿ ಹಬ್ಬದ ಊಟ ಸೇವಿಸಿ  ಇಬ್ಬರು ಮಕ್ಕಳು ಮೃತಪಟ್ಟಿದ್ದರೆ, ಹಲವರು ಅಸ್ವಸ್ಥಗೊಂಡಿದ್ದರು.

ಮಕ್ಕಳನ್ನು ಮರಳಿ ಮೇಘಾಲಯಕ್ಕೆ ಕಳುಹಿಸುವಂತೆ ಪೋಷಕರು ಉಚ್ಚ ನ್ಯಾಯಾಲಯದ ಮೆಟ್ಟಿಲೇರಿದ್ದರು.

*****************

ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿಂದು ಅತಿಥೇಯ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ರಾಜಸ್ಥಾನ ರಾಯಲ್ಸ್ ತಂಡ ಮುಖಾಮುಖಿಯಾಗಲಿವೆ.

ಪಂದ್ಯ ಸಂಜೆ ೭.೩೦ಕ್ಕೆ ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಲಿದೆ.

*********ಮುಕ್ತಾಯ********